ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಮ್ಯೂಚ್ಯೂಯಲ್ ಫಂಡ್

ಶ್ರೀಎಂ.ಸಿ.ವೇಣುಗೋಪಾಲ್ (ವಿಧಾನಸಭೆಯಿಂದ ಚುನಾಯಿತರಾದವರು) :-

1209 (1455) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಪ್ರಾರಂಭದಿಂದ ಇಲ್ಲಿಯವರೆಗೂ, ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹಣ ಹೂಡಿಕೆ ಮಾಡಿದ್ದರೆ, ವಿವರವನ್ನು ನೀಡುವುದು ;

(ಆ) ಪ್ರಸ್ತುತ ಜಾರಿಯಲ್ಲಿರುವ ನಿಯಮಾವಳಿಗಳ ಪ್ರಕಾರ ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡಲು ನಿಷೇಧವಿದ್ದರೂ, ಪ್ರಾಧಿಕಾರದ ಅಧಿಕಾರಿಗಳು ಕಾನೂನು ಬಾಹಿರವಾಗಿ ಹೂಡಿಕೆ ಮಾಡಿದ್ದರಿಂದ, ಸರ್ಕಾರಕ್ಕಾದ ಒಟ್ಟು ನಷ್ಟವೆಷ್ಟು ;

(ಇ) ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡಿದ್ದ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಆಯುಕ್ತರುಗಳ ವಿವರವನ್ನು ಒದಗಿಸುವುದು ;

(ಈ) ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡಿದ್ದರಿಂದ ಸರ್ಕಾರಕ್ಕಾದ ನಷ್ಟವನ್ನು ಭರಿಸಲು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು?